ಅಮಾವಾಸೆಬೈಲಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ಘಟಕ.

850. ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ಕುಂದಾಪುರ ತಾಲ್ಲೂಕಿನ ಕುಗ್ರಾಮವೆಂದು ಪರಿಗಣಿಸಲ್ಪಟ್ಟಿರುವ ಅಮಾವಾಸೆಬೈಲುನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ ತೆಗೆಯುವ ವಿಚಾರ ಸರ್ಕಾರದ ಮುಂದಿದೆಯೇ?
ಆ) ಇದ್ದಲ್ಲಿ, ಎಂದಿನಿಂದ ಎಲ್ಲಿ ತೆಗೆಯಲಾಗುವುದು?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) –

ಅ) ಇಲ್ಲ.
ಆ) ಉದ್ಭವಿಸುವುದಿಲ್ಲ

ಕೆದೂರು ಮಂಡಲ ವ್ಯಾಪ್ತಿಯ ಆರೋಗ್ಯ ಕೇಂದ್ರ ತೆರೆಯುವ ಕುರಿತು.

851. ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ಕುಂದಾಪುರ ತಾಲ್ಲೂಕು, ಕೆದೂರು ಮಂಡಲ ವ್ಯಾಪ್ತಿಯಲ್ಲಿ 9 ಗ್ರಾಮಗಳಿದ್ದರೂ ಸಹಾ ಈ ತನಕ ಈ ಮಂಡಲ ವ್ಯಾಪ್ತಿಯಲ್ಲಿ ಪ್ರಾಥಮಿಕ ಆರೋಗ್ಯ ಘಟಕ : ಕೇಂದ್ರ ತೆರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;
ಆ) ಬಂದಿದ್ದಲ್ಲಿ, ತೆರೆಯುವ ವಿಚಾರ ಸರ್ಕಾರದ ಮುಂದಿದೆಯೇ;
ಇ) ಇದ್ದಲ್ಲಿ, ಎಂದಿನಿಂದ ಎಲ್ಲಿ ತೆರೆಯಲಾಗುವುದು?

ಶ್ರೀ ಜಿ. ಪುಟ್ಟಸ್ವಾಮಿಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) –

ಅ) ಬಂದಿರುವುದಿಲ್ಲ
ಆ) ಉದ್ಭವಿಸುವುದಿಲ್ಲ
ಇ) ಉದ್ಭವಿಸುವುದಿಲ್ಲ

ಕುಂದಾಪುರ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳ ಸಂಖ್ಯೆಗನುಗುಣವಾಗಿ ಸೌಕರ್ಯ

853. ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಕುಂದಾಪುರ) :– ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ಕುಂದಾಪುರ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಗೆ ಪ್ರತಿದಿನ ಬರುವ ಹೊರ ರೋಗಿ ಮತ್ತು ಒಳರೋಗಿಗಳ ಸಂಖ್ಯೆ ಎಷ್ಟು ? (ಪುರುಷರು, ಸ್ತ್ರೀಯರು ಮತ್ತು ಮಕ್ಕಳುವಾರು ವಿವರ ನೀಡುವುದು)
ಆ) ಈ ರೋಗಿಗಳ ಸಂಖ್ಯೆಗನುಸಾರವಾಗಿ ಹಾಸಿಗೆ ಸೌಲಭ್ಯ ಇದೆಯೇ?
ಇ) ಇದ್ದಲ್ಲಿ, ಇರುವ ಹಾಸಿಗೆಗಳ ಸಂಖ್ಯೆ ಎಷ್ಟು?
ಈ) ಇಲ್ಲದಿದ್ದಲ್ಲಿ, ಇದನ್ನು ಹೆಚ್ಚಿಸುವ ವಿಚಾರ ಸರ್ಕಾರದ ಮುಂದಿದೆಯೇ?